ಸರ್ಕಾರಿ ಗೋಮಾಳದಲ್ಲಿ ಬೆಳೆಸಿರುವ ನೀಲಗಿರಿ ತೋಪುಗಳ ಲೂಟಿ.

394 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಗೋಮಾಳದಲ್ಲಿ ಬೆಳೆಸಲಾಗಿರುವ ನೀಲಗಿರಿ ತೋಪುಗಳ ಲೂಟಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ತೋಪುಗಳ ರಕ್ಷಣೆಗೆ ಸರ್ಕಾರದ ಕ್ರಮವೇನು?

ಶ್ರೀ ಹೆಚ್. ವೈ. ಮೇಟಿ (ಅರಣ್ಯ ಸಚಿವರು) :

ಅ) ಒಂದೆರಡು ಸಣ್ಣಪುಟ್ಟ ಪ್ರಕರಣಗಳು ಗಮನಕ್ಕೆ ಬಂದಿದ್ದು, ಇವುಗಳನ್ನು ಪತ್ತೆ ಹಚ್ಚಲಾಗಿದೆ.

ಆ) ಸರ್ಕಾರದ ಆದೇಶ ಸಂಖ್ಯೆ. ಎಹೆಚ್ಎಫ್ಎಫ್. 232 ಪಿಎಸಿ. 86, ದಿನಾಂಕ 12.4.93 ರಲ್ಲಿನ ಮಾರ್ಗಸೂಚಿಯಂತೆ, ಜಂಟಿ ಅರಣ್ಯ ಯೋಜನೆ ಮತ್ತು ನಿರ್ವಹಣೆಯ ಮೂಲಕ ಬಲಿತ ನೆಡು ತೋಪುಗಳ ರಕ್ಷಣೆ ಮತ್ತು ಕಟಾವು ಮಾಡಲು ಗ್ರಾಮ ಅರಣ್ಯ ಸಮಿತಿಗಳನ್ನು ರಚಿಸಲಾಗಿದೆ. ನೆಡುತೋಪುಗಳ ರಕ್ಷಣೆಗಾಗಿ ನೆಡುತೋಪು ಕಾವಲುಗಾರರನ್ನು ನೇಮಿಸಿದೆ ಹಾಗೂ ಅರಣ್ಯ ರಕ್ಷಣಾ ಸಿಬ್ಬಂದಿಯು ರಾತ್ರಿ ಗಸ್ತನ್ನು ಮಾಡುವ ವ್ಯವಸ್ಥೆ ಇರುವುದು.

ಕುಣಿಗಲ್ ಪಟ್ಟಣದಲ್ಲಿ ಕ್ರೀಡಾಂಗಣ ನಿರ್ಮಾಣ

395 - ಶ್ರೀ ಎಸ್. ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪಟ್ಟಣದಲ್ಲಿ ಕ್ರೀಡಾಂಗಣ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದ ಕ್ರಮವೇನು?

ಶ್ರೀ ಅಜಯಕುಮಾರ್ ಸರನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಹೌದು.

ಆ) ಕುಣಿಗಲ್‌ನಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲು ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ. ಜಿಲ್ಲಾ ಪಂಚಾಯತ್ ಮತಿಯಿಂದ ಸೂಕ್ತ ಪ್ರಸ್ತಾವನೆ ಬಂದಲ್ಲಿ ಪರಿಗಣಿಸಲಾಗುವುದು.

ರಾಜ್ಯದಲ್ಲಿ ಹೊಸದಾಗಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ

397 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?